ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರವರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು–01**

**ದೂ.ಸಂ:22214350, ಫ್ಯಾಕ್ಸ್ :22211086, ಇ–ಮೇಲ್: cpi.edu.sgkar@mail.kar.nic.in**

ಸಂಖ್ಯೆ :ಎಂ6/ಮ.ಉ.ಯೋ/ಶಾ.ಅನು/10/ಅಗ್ನಿ ನಂದಕ/2021–22 ದಿನಾಂಕ: 07.01.2022

## ಸುತ್ತೋಲೆ

**ವಿಷಯ :** ಮಧ್ಯಾಹ್ನ ಉಪಹಾರ ಯೋಜನೆ ಮತ್ತು ಕ್ಷೀರಭಾಗ್ಯ ಯೋಜನೆಯನ್ನು ಅನುಷ್ಠಾನ ಮಾಡುತ್ತಿರುವ ಶಾಲೆಗಳಲ್ಲಿ ಅಗ್ನಿ ನಂದಕಗಳನ್ನು ಅಳವಡಿಸುವ ಬಗ್ಗೆ.

**ಉಲ್ಲೇಖ:**
1) ಆಯುಕ್ತರ ಕಛೇರಿ ಸುತ್ತೋಲೆ ಸಂಖ್ಯೆ ಎಂ6/ಅ.ದಾ.ಅ.ಕೋ./ಆಶಾನಂ3 (1)2009–10 ದಿನಾಂಕ 25.05.2010
2) ಆಯುಕ್ತರ ಕಛೇರಿ ಜ್ಞಾಪನಾ ಪತ್ರ ಸಂಖ್ಯೆ ಎಂ6/ಅ.ದಾ. ಅ.ಕೋ. ಅನಂ03/2009–10 ದಿನಾಂಕ 02.07.2013.
3) ಭಾರತ ಸರ್ಕಾರದ ಶಿಕ್ಷಣ ಮಂತ್ರಾಲಯದ ಪತ್ರ ಸಂಖ್ಯೆ 14–2/2013–ಇಇ.5(ಎಂಡಿಎಂ–1–2) ದಿನಾಂಕ 13.02.2015.

ಮಾನ್ಯ ಸರ್ವೋಚ್ಛ ನ್ಯಾಯಾಲಯದ ಸಾರ್ವಜನಿಕ ಹಿತಾಸಕ್ತಿ ರಿಟ್‌ಅರ್ಜಿ ಸಂಖ್ಯೆ: 483/2014ರ ದಿನಾಂಕ 13.04.2009ರ ತೀರ್ಪಿನಂತೆ ಶಾಲೆಗಳಲ್ಲಿ ಅಗ್ನಿನಂದಕಗಳನ್ನು ಅಳವಡಿಸಲು ಹಾಗೂ ಈಗಾಗಲೇ ಅಳವಡಿಸಲಾಗಿರುವ ಅಗ್ನಿ ನಂದಕಗಳಿಗೆ ಡ್ರೈ ಪೌಡರನ್ನು ಮರುತುಂಬಿಸಲು ಉಲ್ಲೇಖ (1) ಮತ್ತು (2)ರ ಸುತ್ತೋಲೆಯಲ್ಲಿ ಸೂಚನೆಯನ್ನು ನೀಡಲಾಗಿದ್ದು, ಈ ಸಂಬಂಧ ಅಗತ್ಯವಿರುವ ಅನುದಾನವನ್ನು ಶಾಲಾ ಅನುದಾನ/ಶಾಲಾ ಸಂಚಿತ ನಿಧಿ ಖಾತೆಯಲ್ಲಿ ಲಭ್ಯವಿರುವ ಅನುದಾನದಿಂದ ಭರಿಸಲು ತಿಳಿಸಲಾಗಿದೆ. ಉಲ್ಲೇಖ (3)ರ ಪತ್ರದಲ್ಲಿ ಕೇಂದ್ರ ಸರ್ಕಾರದಿಂದ ಮಧ್ಯಾಹ್ನ ಉಪಾಹಾರ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ಶಾಲಾ ಹಂತದಲ್ಲಿ ಅನುಸರಿಸಬೇಕಾಗಿರುವ ಸುರಕ್ಷತಾ ಕ್ರಮಗಳ ಬಗ್ಗೆ ನೀಡಲಾಗಿರುವ ಮಾರ್ಗಸೂಚಿಯಲ್ಲಿ ಅಗ್ನಿನಂದಕಗಳನ್ನು ಅಳವಡಿಸುವುದನ್ನು ಕಡ್ಡಾಯಗೊಳಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಮಧ್ಯಾಹ್ನ ಉಪಾಹಾರ ಯೋಜನೆ ಮತ್ತು ಕ್ಷೀರಭಾಗ್ಯ ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿರುವ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ಮಕ್ಕಳ ಹಿತದೃಷ್ಟಿಯಿಂದ ಹಾಗೂ ಸುರಕ್ಷತೆಯ ನಿಟ್ಟಿನಲ್ಲಿ ಶಾಲೆಗಳಲ್ಲಿ ಲಭ್ಯವಿರುವ ಶಾಲಾ ಅನುದಾನ/ಶಾಲಾ ಸಂಚಿತ ನಿಧಿ ಖಾತೆಯಲ್ಲಿ ಲಭ್ಯವಿರುವ ಅನುದಾನದಿಂದ ಶಾಲೆಗಳಿಗೆ ಅಗತ್ಯವಿರುವ ಅಗ್ನಿನಂದಕಗಳನ್ನು ಕೆ.ಟಿ.ಪಿ.ಪಿ. ಕಾಯಿದೆಯಂತೆ ನಿಯಮಾನುಸಾರ ಖರೀದಿಸಿ ಅಳವಡಿಸಲು, ಒಂದು ವೇಳೆ ಈಗಾಗಲೇ ಅಗ್ನಿನಂದಕ (Fire extinguisher)ಗಳನ್ನು ಅಳವಡಿಸಿದ್ದರೆ ಸದರಿ ಅಗ್ನಿನಂದಕಗಳಿಗೆ ಡ್ರೈ ಪೌಡರನ್ನು ಮರುತುಂಬಿಸಿ ಮರುಬಳಕೆ ಮಾಡಲು ಕ್ರಮ ಕೈಗೊಳ್ಳುವುದು. ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಕೂಡಲೇ ಅಗತ್ಯ ಕ್ರಮಕೈಗೊಳ್ಳಲು ಸೂಚಿಸಿದೆ.

**ಅಗ್ನಿನಂದಕಗಳ ಅಳವಡಿಕೆ ಮತ್ತು ತೆಗೆದುಕೊಳ್ಳಬೇಕಾಗಿರುವ ಮುಂಜಾಗ್ರತಾ ಕ್ರಮಗಳು:**

1) ಅಗ್ನಿನಂದಕಗಳ ಬಳಕೆ ಕುರಿತು ಶಾಲಾ ಮುಖ್ಯ ಶಿಕ್ಷಕರು/ಸಹಶಿಕ್ಷಕರು ಅಡುಗೆ ಸಿಬ್ಬಂದಿಯವರಿಗೆ ಸೂಕ್ತ ತರಬೇತಿಯನ್ನು ಆಯೋಜಿಸುವುದು.
2) ಅಗ್ನಿನಂದಕಗಳನ್ನು ಅಡುಗೆ ಕೋಣೆಯಲ್ಲಿ ಕೈಗೆ ಎಟಕುವ ರೀತಿಯಲ್ಲಿ ಅಳವಡಿಸಿರುವುದನ್ನು ಖಾತ್ರಿಪಡಿಸಿಕೊಳ್ಳುವುದು.
3) ಪ್ರತಿ ಶಾಲೆಯಲ್ಲಿ ಕೆಂಪು ವರ್ಣದ ಬಕೆಟ್‌ಗಳಲ್ಲಿ ಮರಳನ್ನು ಸಂಗ್ರಹಿಸಿಡಲು ಕ್ರಮ ವಹಿಸುವುದು.
4) ಅಗ್ನಿನಂದಕಗಳ ಬಳಕೆ ಕುರಿತಂತೆ ಅನುಸರಿಸಬೇಕಾದ ಕ್ರಮಗಳನ್ನು ಶಾಲಾ ಗೋಡೆಯ ಮೇಲೆ ಬರೆಸುವುದು.

R 07/01/2022

ಡಾ. ವಿಶಾಲ್ .ಆರ್ ಭಾ.ಆ.ಸೇ.
ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ
ಬೆಂಗಳೂರು

ಇವರ ಅಗತ್ಯ ಕ್ರಮಕ್ಕಾಗಿ,

1. ರಾಜ್ಯದ ಎಲ್ಲಾ ಉಪ ನಿರ್ದೇಶಕರು (ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ.
2. ರಾಜ್ಯದ ಎಲ್ಲಾ ಶಿಕ್ಷಣಾದಿಕಾರಿಗಳು ಅಕ್ಷರ ದಾಸೋಹ ಜಿಲ್ಲಾ ಪಂಚಾಯತ್ ರವರಿಗೆ.
3. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಾಲ್ಲೂಕು /ವಲಯ ರವರಿಗೆ.
4. ರಾಜ್ಯದ ಎಲ್ಲಾ ಸಹಾಯಕ ನಿರ್ದೇಶಕರು ಅಕ್ಷರ ದಾಸೋಹ ತಾಲ್ಲೂಕು ಪಂಚಾಯತ್ ರವರಿಗೆ.
5. ಮಧ್ಯಾಹ್ನ ಉಪಹಾರ ಯೋಜನೆ ಮತ್ತು ಕ್ಷೀರ ಬಾಗ್ಯ ಯೋಜನೆಯನ್ನು ಅನುಷ್ಠಾನ ಮಾಡುತ್ತಿರುವ ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಶಾಲೆಗಳ ಮುಖ್ಯ ಶಿಕ್ಷಕರಿಗೆ (ಕ್ಷೇತ್ರ ಶಿಕ್ಷಣಾಧಿಕರಿಗಳ ಮೂಲಕ)

ಇವರಿಗೆ ಮಾಹಿತಿಗಾಗಿ

1. ರಾಜ್ಯದ ಎಲ್ಲಾ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು ಜಿಲ್ಲಾ ಪಂಚಾಯತ್‌ರವರಿಗೆ.
2. ರಾಜ್ಯದ ಎಲ್ಲಾ ಕಾರ್ಯ ನಿರ್ವಹಣಾಧಿಕಾರಿಗಳು ತಾಲ್ಲೂಕು ಪಂಚಾಯತ್‌ರವರಿಗೆ.
3. ಅಧ್ಯಕ್ಷರು ಕರ್ನಾಟಕ ಆಹಾರ ಆಯೋಗ ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಸಲ್ಲಿಸಿದೆ.
4. ಕಛೇರಿ ಪ್ರತಿ.